## ವಿಭಾಗ – 'ಎ'

### (ಪಠ್ಯಗಳ ಅಧ್ಯಯನ – ಗದ್ಯ, ಪದ್ಯ, ಪಠ್ಯಪೂರಕ ಅಧ್ಯಯನ)

**ಈ ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ :** 9 × 1 = 9

1. ರಾಹಿಲನು ಮುದುಕಿಯ ಎದುರಿಗೆ ನುಡಿದ ಗಂಭೀರವಾದ ಮಾತು ಯಾವುದು ?
2. ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿಯ ಹೆಸರೇನು ?
3. 'ವೆಸ್ಟ್ ಮಿನ್‌ಸ್ಟರ್ ಅಬೆ' ಯಾರ ಸ್ಮಾರಕವಾಗಿದೆ ?
4. ಹುಲಿಯನ್ನು ಎದುರಿಸಲು ಶಾನುಭೋಗರಿಗೆ ಯಾವುದು ಬ್ರಹ್ಮಾಸ್ತ್ರವಾಯಿತು ?
5. ಸುಕುಮಾರಸ್ವಾಮಿಯ ತಂದೆ–ತಾಯಿಗಳ ಹೆಸರೇನು ?
6. ಕವಿ ಬೇಂದ್ರೆಯವರ ಪ್ರಕಾರ ಹಕ್ಕಿಯು ಯಾವುದರ ಸಂಕೇತವಾಗಿದೆ ?
7. ಕುಂಪಣಿ ಸರಕಾರ ಹೊರಡಿಸಿದ ಆದೇಶ ಏನು ?
8. ಪರಶುರಾಮನು ದ್ರೋಣನಿಗೆ ಕೊಟ್ಟ ಪ್ರಧಾನ ಅಸ್ತ್ರಗಳು ಯಾವುವು ?
9. ವಸಂತ ಯಾರಿಗೆ ಮುಖ ತೋರಲಿಲ್ಲ ?

**ಈ ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** 10 × 2 = 20

10. ಮಹಿಳೆಯ ಆರ್ತನಾದ ಕೇಳಿ ರಾಹಿಲನು ಮನದಲ್ಲಿ ಏನೆಂದುಕೊಂಡನು ?
11. ಸಾಮ್ರಾಟರ ರಾಜ್ಯಾಭಿಷೇಕವಾಗುವ ಸಿಂಹಾಸನದ ಮೇಲಿರುವ ಕಲ್ಲುಪಾಟಿಯ ವಿಶೇಷತೆಯೇನು ?
12. ಮದಲಿಂಗನ ಕಣಿವೆಯಲ್ಲಿ ಬರುವಾಗ ಶಾನುಭೋಗರ ಮನದಲ್ಲಿ ಮೂಡಿದ ಭಾವನೆಗಳಾವುವು ?
13. ಸುಕುಮಾರಸ್ವಾಮಿಯು ಹೇಗೆ ಸುಖಭೋಗಗಳನ್ನು ಅನುಭವಿಸುತ್ತಿದ್ದನು ?
14. ಲಾವಣಿಗಳನ್ನು ಏಕೆ ವೀರಗೀತೆಗಳು ಎನ್ನಲಾಗಿದೆ ?
15. ಪರಶುರಾಮನು ಮಣ್ಣಿನ ಪಾತ್ರೆಯಲ್ಲಿ ಅರ್ಘ್ಯವನ್ನು ಕೊಡಲು ಕಾರಣವೇನು ?
16. ಜಾತಿ ವ್ಯವಸ್ಥೆಯ ಬಗೆಗೆ ವಿವೇಕಾನಂದರ ಅಭಿಪ್ರಾಯವೇನು ?
17. ಜನರಲ್ ಡಯರ್‌ನು ಜಲಿಯನ್ ವಾಲಾಭಾಗ್‌ನಲ್ಲಿ ಮಾಡಿಸಿದ ಕ್ರೂರ ಪೈಶಾಚಿಕ ಕೃತ್ಯವನ್ನು ತಿಳಿಸಿ.
18. ಸುಂದರಿಗೆ ಮೃಗವನ್ನು ಮತ್ತೆ ನೋಡಬೇಕೆಂಬ ಆಸೆ ತೀವ್ರವಾಗಲು ಕಾರಣಗಳಾವುವು ?
19. 'ಉತ್ತರಾಣಿ ಗಿಡ' ಎಂಬ ಉತ್ತರ ಬರಲು ಹೇಳಿದ ಒಗಟನ್ನು ಬರೆಯಿರಿ.

**ಈ ಕೆಳಗಿನ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ :** 4 × 3 = 12

20. "ಯಾವ ಜೀವಿಯೂ ತನ್ನಷ್ಟಕ್ಕೆ ತಾನಿಲ್ಲ"
21. "ಈತನ ಮಾತು ಅಶ್ರುತಪೂರ್ವಮ್"
22. "ಹೊಸಗಾಲದ ಹಸುಮಕ್ಕಳ ಹರಸಿ"
23. "ಅರಸುಗಳ ವಾಜಿಯಂ ಬಿಡು"

